# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.18/ಪಿಆರ್:53:2022-23 ದಿನಾಂಕ:23.12.2022

## ಬಾಗಲಗುಂಟೆ ವಾರ್ಡ್-18 ಸಮಿತಿ ಸಭೆಯ ನಡವಳಿಗಳು

**ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)/ಪಿಆರ್/35/2020-21, ದಿ.16.04.2021ರ ಆದೇಶದಂತೆ ದಿ.23.12.2022 ರಂದು ನಡೆದ ಬಾಗಲಗುಂಟೆ ವಾರ್ಡ್ ನಂ.18ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-**

**ಸಭೆಗೆ ಹಾಜರಾಗಿದ್ದವರ ವಿವರಗಳು:-**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಸುರೇಶ್ ರುದ್ರಪ್ಪ | ಆರೋಗ್ಯ ವೈಧ್ಯಾಧಿಕಾರಿಗಳು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು |
| 2 | ಶ್ರೀ.ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ನಂ.18, ಬಾಗಲಗುಂಟೆ |
| 3 | ಶ್ರೀ.ತನಯ್ ಕುಮಾರ್ ಎ | ಸಹಾಯಕ ಅಭಿಯಂತರರು, ದಾಸರಹಳ್ಳಿ |
| 4 | ಶ್ರೀಮತಿ.ಮಹಾಲಕ್ಷ್ಮಿ ಬೇಗಾರ್ | ಕೆಲಸ ಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 5 | ಶ್ರೀ.ಮೋಹನ್ ಗೌರೋಜಿ | ಹಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ.ಸಾಧಿಕೆಧನು | Junior HAF |
| 7 | ಶ್ರೀಮತಿ.ಶೋಭ ಜೆ | ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ |
| 8 | ಶ್ರೀ.ಲಕ್ಷ್ಮಿ ವೆಂಕಟೇಶ್ ಬಿ.ಟಿ | ಅಧ್ಯಕ್ಷರು, ಕದಂಬ ನಾಗರೀಕ ಸಮಿತಿ, ಬಾಗಲಗುಂಟೆ |
| 9 | ಶ್ರೀ.ಆನಂದ ಜಿ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.18 ಬಾಗಲಗುಂಟೆ |
| 10 | ಶ್ರೀ.ಸದಾಶಿವಯ್ಯ | ಎಂ.ಇ.ಐ ಬಡಾವಣೆ ನಾಗರೀಕ ಹಿತರಕ್ಷಣಾ ಸಮಿತಿ |
| 11 | ಟಿ.ವೀರಪ್ಪ | ಸಂಚಾರಿ ಪೋಲೀಸ್ |
| 12 | ಶ್ರೀ.ಶ್ರೀನಿವಾಸ ಹೆಚ್ | ಕಿರಿಯ ಅಭಿಯಂತರರು, ಬೆಸ್ಕಾಂ |
| 13 | ಶ್ರೀ.ಕೃಷ್ಣಮೂರ್ತಿ | ಕಂದಾಯ ಅಧಿಕಾರಿಗಳು |

ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆಧ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

Scanned with CamScanner

- **ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

➢ ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ಮುನಿಕೊಂಡಪ್ಪ ಬಡಾವಣೆಯ ಮ್ಯಾನ್‌ಹೋಲ್‌ಗಳಲ್ಲಿ ಹೂಳು ತುಂಬಿರುವುದಾಗಿ, ಹೂಳನ್ನು ತುರ್ತಾಗಿ ತೆಗೆಯಲು ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.

➢ ಒಳಚರಂಡಿ ವ್ಯವಸ್ಥೆಗಾಗಿ ಪೈಪ್‌ಲೈನ್ ಅಳವಡಿಸಲು ರಸ್ತೆಯನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕತ್ತರಿಸಿರುವುದು ಕಂಡುಬಂದಿರುತ್ತದೆ. ಸದರಿ ವಿಷಯಗಳ ದುರಸ್ಥಿ ಕಾರ್ಯವನ್ನು ತುರ್ತಾಗಿ ನಿರ್ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರಿಗೆ ಸೂಚಿಸಲಾಯಿತು.

ಕ್ರಮ: ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ

- **ಕಂದಾಯ ಇಲಾಖೆಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

➢ 18 ವರ್ಷ ವಯಸ್ಸಿನವರಿಗೆ ಹೊಸದಾಗಿ ಮತದಾರರ ಗುರುತಿನ ಚೀಟಿಗಳನ್ನು ನೀಡಲು ಆನ್‌ಲೈನ್‌ನಲ್ಲಿ ಅರ್ಜಿ ಸ್ವೀಕರಿಸುತ್ತಿರುವುದಾಗಿ ತಿಳಿಸಿದರು.

➢ ಮತದಾರರ ಗುರುತಿನ ಚೀಟಿಗಳ ಪರಿಶೀಲನಾ ಕಾರ್ಯವನ್ನು ಮನೆಮನೆಗೆ ತೆರಳಿ ಪರಿಶೀಲಿಸಲಾಗುತ್ತಿರುವುದಾಗಿ ಕಂದಾಯ ಅಧಿಕಾರಿಗಳು ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಿದರು.

ಕ್ರಮ:ಕಂದಾಯ ಇಲಾಖೆ, ಸ.ಕಂ.ಅ, ವಾ–18/ಸದಸ್ಯ ಕಾರ್ಯದರ್ಶಿ

- **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

➢ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಘನತ್ಯಾಜ್ಯ ವಿಲೇವಾರಿ ಮಾಡಲು ಕ್ರಮವಹಿಸುತ್ತಿರುವುದಾಗಿ ಸಭೆಗೆ ತಿಳಿಸಿದರು. 35 ಆಟೋಗಳು 35 ಬ್ಲಾಕ್‌ಗಳಲ್ಲಿ ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿರುವುದಾಗಿ ತಿಳಿಸಿದರು ಹಾಗೂ ಸಂಬಂಧಿಸಿದ ಗುತ್ತಿಗೆದಾರರು ಹಾಗೂ ಮೇಲ್ವಿಚಾರಕರುಗಳು ಹಾಜರಿದ್ದು, ಘನತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಲು ಸೂಚಿಸಲಾಯಿತು.

➢ ಬ್ಲಾಕ್‌ಸ್ಪಾಟ್‌ಗಳಲ್ಲಿ ಸಾರ್ವಜನಿಕರು ಕಸ ಹಾಕದಂತೆ ಬಿಬಿಎಂಪಿ ಮಾರ್ಷಲ್‌ಗಳನ್ನು ನಿಯೋಜಿಸಲು ವಾರ್ಡ್ ಸಮಿತಿ ಸದಸ್ಯರು ಕೋರಿದರು. ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.

➢ ಬಾಗಲಗುಂಟೆಯಲ್ಲಿರುವ ಸ್ಮಶಾನದ ಸ್ವಚ್ಛತಾ ಕಾರ್ಯ ಕೈಗೊಳ್ಳಲು ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.

ಕ್ರಮ:ಸ.ಕಾ.ನಿ.ಅ (ಘ.ತ್ಯಾ.ನಿ)/ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು

Scanned with CamScanner

- **<u>ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ.</u>**

➢ ಕೋವಿಡ್ ನಿಯಂತ್ರಣ ಸಂಬಂಧ ಹೊಸದಾಗಿ ಕಾರ್ಬಿವ್ಯಾಕ್ಸ್ ಲಸಿಕೆಯನ್ನು ನೀಡಲಾಗುತ್ತಿದ್ದು, ಸದರಿ ಲಸಿಕೆ ಸಧ್ಯದ ಪರಿಸ್ಥಿತಿಯಲ್ಲಿ ಲಭ್ಯವಿಲ್ಲದಿರುವುದಾಗಿ ಈ ಹಿಂದೆ ನೀಡಲಾಗುತ್ತಿದ್ದ ಬೂಸ್ಟರ್ ಲಸಿಕೆ 100% ಪೂರ್ಣಗೊಂಡಿರುವುದಾಗಿ ಹಾಗೂ ಕೋವಿಡ್ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕೋವಿಡ್ ತಪಾಸಣಾ ಕಾರ್ಯ ಕೈಗೊಂಡಿರುವುದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯಾಧಿಕಾರಿಗಳು ತಿಳಿಸಿದರು.

➢ ಕೋವಿಡ್ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರುಗಳು ಕಡ್ಡಾಯವಾಗಿ ಮಾಸ್ಕ್ ಧರಿಸಬೇಕಾಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯಾಧಿಕಾರಿಗಳು ತಿಳಿಸಿದರು.

ಕ್ರಮ: ಕೋವಿಡ್ ಆರೋಗ್ಯ ವೈಧ್ಯಾಧಿಕಾರಿಗಳು/ ಹಿರಿಯ ಆರೋಗ್ಯ ಪರಿವೀಕ್ಷಕರು

- **ಇತರೆ ವಿಷಯಗಳ ಬಗ್ಗೆ.**

➢ ಬೆಸ್ಕಾಂ ಇಲಾಖೆಯವರು ಸಾರ್ವಜನಿಕ ರಸ್ತೆಯನ್ನು ಅಗೆದು ಕೇಬಲ್ ಅಳವಡಿಸುವ ಕಾರ್ಯವನ್ನು ನಡೆಸುತ್ತಿರುವುದರಿಂದ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುತ್ತದೆ. ಈ ಬಗ್ಗೆ ತುರ್ತು ಕ್ರಮವಹಿಸಿ ದುರಸ್ಥಿ ಕಾರ್ಯ ಕೈಗೊಂಡು ಪೂರ್ಣಗೊಳಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲು ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ಕೋರಿದರು.

➢ ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿನ ಮಾನ್ಯ ಶಾಸಕರು, ದಾ.ವಿ.ಸ.ಕ್ಷೇ ರವರ ಮನೆಯ ಹತ್ತಿರ ಬೀದಿದೀಪಗಳು ಸರಿಯಾಗಿ ಕಾರ್ಯ ನಿರ್ವಹಿಸದೇ ಇರುವ ಬಗ್ಗೆ ಪರಿಶೀಲಿಸಲು ವಾರ್ಡ್ ಸದಸ್ಯರು ಸಭೆಯಲ್ಲಿ ಕೋರಿದರು ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.

➢ ಬಿಬಿಎಂಪಿ ಮಾರ್ಷಲ್‌ಗಳು ಕಳಪೆ ಗುಣಮಟ್ಟದ ಪ್ಲಾಸ್ಟಿಕ್ ಬಳಸುತ್ತಿರುವ ಅಂಗಡಿ ಮಾಲೀಕರುಗಳು, ಬೀದಿಬದಿ ವ್ಯಾಪಾರಿಗಳಿಗೆ ಇನ್ನಿತರೆಯವರುಗಳಿಗೆ ದಂಡ ವಿಧಿಸುತ್ತಿರುವುದಾಗಿ ಬಿಬಿಎಂಪಿ ಮಾರ್ಷಲ್‌ಗಳು ತಿಳಿಸಿದರು ಇದನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸರ್ವಾನುಮತದಿಂದ ಸಭೆಯಲ್ಲಿ ಸೂಚಿಸಲಾಯಿತು.

➢ ರಾಷ್ಟ್ರೀಯ ಹೆದ್ದಾರಿ-4ರ 8ನೇ ಮೈಲಿ ಸಿಗ್ನಲ್ ಹತ್ತಿರ ಯಾವುದೇ ಬೆಳಕಿನ ವ್ಯವಸ್ಥೆ ಇಲ್ಲದೆ ಇರುವುದರಿಂದ ಸಾರ್ವಜನಿಕರಿಗೆ ರಾತ್ರಿಯ ವೇಳೆಯಲ್ಲಿ ತುಂಬಾ ತೊಂದರೆ ಉಂಟಾಗುತ್ತಿರುವುದರಿಂದ ಹೈಮಾಸ್ಕ್ ಬೆಳಕಿನ ವ್ಯವಸ್ಥೆಯನ್ನು ಕಲ್ಪಿಸಿಕೊಡಬೇಕಾಗಿ ಪೋಲೀಸ್ ಅಧಿಕಾರಿಗಳು, ಸಂಚಾರಿ ಠಾಣೆ ರವರು ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.

Scanned with CamScanner

➢ ಬಾಗಲಗುಂಟೆ ವಾರ್ಡ್ ವ್ಯಾಪ್ತಿಯ ಕರೆಕಲ್ಲು ಬಡಾವಣೆಯಲ್ಲಿ ಬೀದಿ ದೀಪದ ವ್ಯವಸ್ಥೆ ಇಲ್ಲದಿರುವುದರಿಂದ ಹೊಸದಾಗಿ ಬೀದಿ ದೀಪದ ಕಂಬಗಳನ್ನು ಅಳವಡಿಸಿ, ಬೆಳಕಿನ ವ್ಯವಸ್ಥೆಯನ್ನು ಕಲ್ಪಿಸಿಕೊಡಲು ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ಕೋರಿದರು.

ಸ.ಅ ವಾ.18/ ಸ.ಕಾ.ನಿ.ಅ (ದಾಸರಹಳ್ಳಿ ಉಪ-ವಿಭಾಗ)

**ಸಹಾಯಕ ಅಭಿಯಂತರರು**
**ಹಾಗೂ ಸದಸ್ಯ ಕಾರ್ಯದರ್ಶಿ ವಾರ್ಡ್ ಸಮಿತಿ**

**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ಸಂ.18, ಬಾಗಲಗುಂಟೆ**
**ಮತ್ತು ಆರೋಗ್ಯ ವೈದ್ಯಾಧಿಕಾರಿಗಳು (ದಾ.ವ)**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧಿಕಾರಿಗಳ ಮಾಹಿತಿಗಾಗಿ:-**

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಆರೋಗ್ಯ ವೈದ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
9) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
12) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಲ್ಯಾಣಾಧಿಕಾರಿಗಳು (ದಾವ) ಬಿಬಿಎಂಪಿ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14) ಕಛೇರಿ ಪ್ರತಿ.

Scanned with CamScanner